**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಹೆಚ್ಎಸ್/865/2020

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 09-09-2020.

## ಸುತ್ತೋಲೆ

ವಿಷಯ: ಕೋವಿಡ್-19 ನಿಯಂತ್ರಣ ಸಂಬಂಧ ಅಗತ್ಯ ಕ್ರಮಗೊಳ್ಳಲು ಮತ್ತು ಸೋಂಕನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಗ್ರಾಮ ಪಂಚಾಯಿತಿ ಯಲ್ಲಿನ ಡಾಟಾ ಎಂಟ್ರಿ ಆಪರೇಟರುಗಳ ಸೇವೆ ಪಡೆಯುವ ಬಗ್ಗೆ.

*****

ರಾಜ್ಯದ ತಾಲ್ಲೂಕಿನಲ್ಲಿರುವ, ತಾಲ್ಲೂಕು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ ಇದ್ದು, ಸುಗಮ ಕಾರ್ಯನಿರ್ವಹಣೆಗೆ ತುಂಬಾ ಕಷ್ಟಕರವಾಗಿದ್ದು, ಕೋವಿಡ್-19 ಸೊಂಕು ನಿಯಂತ್ರಣ ಕಾರ್ಯದ ಹಾಗೂ ಆರೋಗ್ಯ ಇಲಾಖೆಯ ಇತರೆ ಕಾರ್ಯಕ್ರಮಗಳ ಬಗ್ಗೆ ದಾಖಲಾತಿ ಕೆಲಸಗಳನ್ನು ನಿರ್ವಹಿಸಲು ಸಿಬ್ಬಂದಿ ಕೊರತೆ ಇದ್ದು, ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಒದಗಿಸಿಕೊಡುವ ಅಗತ್ಯವಿರುತ್ತದೆ.

ಈ ಬಗ್ಗೆ ಆರೋಗ್ಯ ಇಲಾಖೆಯಿಂದ ವ್ಯವಸ್ಥೆ ಮಾಡುವವರೆಗೆ ಈ ಕೆಳಕಂಡ ವ್ಯವಸ್ಥೆ ಮಾಡಲು ಆದೇಶಿಸಿದೆ.

1. ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟರ್‌ಗಳನ್ನು, ಆಯಾಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಪ್ರತಿ ದಿನ ಒಂದು ಗಂಟೆ ಕೆಲಸ ನಿರ್ವಹಿಸುವುದು;
2. ಗ್ರಾಮ ಪಂಚಾಯಿತಿಯಲ್ಲಿ ಅವರ ಕೆಲಸದ ವೇಳೆ ಒಂದು ಗಂಟೆ ಕಡಿತಗೊಳಿಸುವುದು;
3. ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಳಗಳಲ್ಲಿ, ಗ್ರಾಮ ಪಂಚಾಯಿತಿ ಇಲ್ಲದಿದ್ದಲ್ಲಿ, ಪಕ್ಕದ ಗ್ರಾಮ ಪಂಚಾಯಿತಿಯಿಂದ ಡಾಟಾ ಎಂಟ್ರಿ ಆಪರೇಟರ್‌ಗಳನ್ನು ಕಳುಹಿಸಲು ವ್ಯವಸ್ಥೆ ಮಾಡುವುದು;

..2/-

4. ಈ ಬಗ್ಗೆ ಯಾವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, ಯಾವ ಗ್ರಾಮ ಪಂಚಾಯಿತಿ ಡಾಟಾ ಎಂಟ್ರಿ ಆಪರೇಟರ್ ಕೆಲಸ ನಿರ್ವಹಿಸಬೇಕು ಎಂಬ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು ತಕ್ಷಣ ಆದೇಶ ನೀಡುವುದು.
5. ಈ ಮಾಹಿತಿಯನ್ನು ಪ್ರಾದೇಶಿಕ ಆಯುಕ್ತರ ಕಚೇರಿಗೆ, ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ, ಉಪ ವಿಭಾಗಾಧಿಕಾರಿಗಳಿಗೆ, ತಹಶೀಲ್ದಾರ್‌ಗಳಿಗೆ ಹಾಗೂ ಸಂಬಂಧಪಟ್ಟ ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಮಾಹಿತಿ ನೀಡುವುದು;
6. ಈ ರೀತಿ ಹೆಚ್ಚುವರಿಯಾಗಿ ನಿಯೋಜಿಸಿದ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳು, ತರಬೇತಿ ನೀಡುವುದು;
7. ಸಂಬಂಧಪಟ್ಟ ಉಪವಿಭಾಗಾಧಿಕಾರಿಗಳು ಇದರ ಮೇಲ್ವಿಚಾರಣೆ ಮಾಡುವುದು. ಎಲ್ಲಾ ಉಪವಿಭಾಗಾಧಿಕಾರಿಗಳು ಅವರ ವ್ಯಾಪ್ತಿಯ ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರ ಸಭೆ ಕರೆದು ಮುಕ್ತವಾಗಿ ಚರ್ಚಿಸಿ, ಸಣ್ಣಮಟ್ಟ ಸಮಸ್ಯೆಗಳನ್ನು ಸ್ಥಳೀಯವಾಗಿ ಬಗೆಹರಿಸುವುದು. ಎಲ್ಲಾ ತಾಲ್ಲೂಕುಗಳಲ್ಲಿ ಸಭೆಗಳನ್ನು ಪ್ರತಿ ಮಾಹೆಯ 10ನೇ ತಾರೀಖಿನೊಳಗೆ ನಡೆಸಬೇಕು.

ಮೇಲ್ಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಿ ಅನುಷ್ಠಾನಗೊಳಿಸಲು ಸಂಬಂಧಿಸಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಧಿಕಾರಿಗಳು, ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದೆ.

(ಟಿ.ಎಂ. ವಿಜಯ್ ಭಾಸ್ಕರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ

**ಇವರಿಗೆ:**

1. ಎಲ್ಲಾ ವಿಭಾಗಾಧಿಕಾರಿಗಳು,
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು,
3. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.